RNU AIR DHARWAD

**MARCH 9,2025**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

**ಧಾರವಾಡ ನಗರ ಕರ್ನಾಟಕ** ಕಾಲೇಜು ಆವರಣದ, ಸೃಜನಾ ರಂಗಮಂದಿರದಲ್ಲಿ ಇಂದು ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ನವಲಗುಂದ ಶಾಸಕ ಎನ್.ಎಚ್ ಕೋನರೆಡ್ಡಿ ಅವರು ಉದ್ಯೋಗ ಮೇಳವನ್ನು ಉದ್ಘಾಟಿಸಿದರು. ಕೌಶಲ ಅಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆ, ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ ಹಾಗೂ ಧಾರವಾಡ ಜಿಲ್ಲಾಡಳಿತದ ಸಹಯೋಗದಲ್ಲಿ ಆಯೋಜಿತವಾಗಿರುವ ಉದ್ಯೋಗ ಮೇಳವು ಇಂದು ಸಂಜೆ 6 ಗಂಟೆಯವರೆಗೆ ನಡೆಯಲಿದೆ, 65 ಕೈಗಾರಿಕೆಗಳು, 25 ಸಂಸ್ಥೆಗಳು ಭಾಗವಹಿಸಿವೆ.

<><><>

**ಕರ್ನಾಟಕ ಸಾಹಿತ್ಯ ಅಕಾದೆಮಿಯು** 2023 ರ ವಾರ್ಷಿಕ ಗೌರವ ಪ್ರಶಸ್ತಿ, ಸಾಹಿತ್ಯ ಶ್ರೀ ಪ್ರಶಸ್ತಿ ಹಾಗೂ 2022 ನೇ ಸಾಲಿನ ಪುಸ್ತಕ ಬಹುಮಾನ ಪ್ರಶಸ್ತಿ ಪುರಸ್ಕೃತರ ಹೆಸರುಗಳನ್ನು ಘೋಷಿಸಿದೆ. ಅಕಾದೆಮಿ ಅಧ್ಯಕ್ಷ ಎಲ್.ಎನ್ ಮುಕುಂದರಾಜ್ ಪ್ರಶಸ್ತಿಗಳನ್ನು ಬೆಂಗಳೂರಿನಲ್ಲಿ ಪ್ರಕಟಿಸಿದರು. 2022 ನೇ ಸಾಲಿನ ದಾಸ ಸಾಹಿತ್ಯ ಪ್ರಕಾರದಲ್ಲಿ, ಜಲಜಾ ಶ್ರೀಪತಿ ಆಚಾರ್ಯ ಗಂಗೂರ್, ದತ್ತಿನಿಧಿ ಬಹುಮಾನ ಪ್ರಶಸ್ತಿಗೆ ಭಾಜನರಾದ ಹೆಸರಾಂತ ಸಾಹಿತಿ ಧಾರವಾಡದ ಡಾಕ್ಟರ ಶ್ರೀಧರ ಹೆಗಡೆ ಭದ್ರನ್ ಅವರು ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

**ಪಂಚಾಯ್ತಿ ಇಂದ ಸಂಸತ್ತಿನ ವರೆಗೂ,** ಹೆಣ್ಣು ಮಕ್ಕಳಿಗೆ ಮೀಸಲಾತಿ ಕಲ್ಪಿಸಲಾಗಿದ್ದು, ವಿಧಾನಸಭೆ ಮತ್ತು ಲೋಕಸಭೆಯಲ್ಲಿ ಮಹಿಳೆಯರಿಗೆ, ಶೇಕಡ 33 ಮೀಸಲಾತಿ ಸಿಗಲಿದೆ ಎಂದು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹೇಳಿದ್ದಾರೆ. ಕಲಬುರಗಿಯ ಪೂಜ್ಯ ದೊಡ್ಡಪ್ಪ ಅಪ್ಪ ಮಹಾವಿದ್ಯಾಲಯದ ಸಭಾಂಗಣದಲ್ಲಿ, ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಅವರು ಮಾತನಾಡಿದರು. ಮಲ್ಲಿಕಾರ್ಜುನ ಖರ್ಗೆ, ಪ್ರಿಯಾಂಕ್ ಖರ್ಗೆ ಹಾಗೂ ಅಜಯ್ ಸಿಂಗ್ ನೀತಿ ಅಯೋಗದ, ಮಹತ್ವಕಾಂಕ್ಷೆ ತಾಲೂಕುಗಳಾದ, ಶಾಹಾಬಾದ, ಕಾಳಗಿ ಹಾಗೂ ಅಫಜಲಪುರದ ಸಾವಿರದ 257 ಚೊಚ್ಚಲ ಗರ್ಭಿಣಿಯರಿಗೆ, ಆರೋಗ್ಯ ಪುಷ್ಠಿ ಯೋಜನೆ ಕಿಟ್ ವಿತರಿಸಿದರು. 4 ಸಾವಿರದ 9 ನೂರಾ 44 ಹೆಣ್ಣು ಮಕ್ಕಳ, ಸುಕನ್ಯಾ ಸಮೃದ್ಧಿ ಯೋಜನೆ ಬ್ಯಾಂಕ್ ಪಾಸ್ ಬುಕ್ ಗಳನ್ನು, ಪಾಲಕರಿಗೆ ಅವರು ನೀಡಿದರು.

<><><>

**ರಾಜ್ಯ ಮಹಿಳಾ ಮತ್ತು ಮಕ್ಕಳ** ಅಭಿವೃದ್ಧಿ ಇಲಾಖೆ ಬೆಂಗಳೂರಿನಲ್ಲಿ ಆಯೋಜಿಸಿದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ' ಕಾರ್ಯಕ್ರಮದಲ್ಲಿ 20 ಮಹಿಳೆಯರು ಹಾಗೂ ಆರು ಸಂಸ್ಥೆಗಳಿಗೆ 2024–25 ನೇ ಸಾಲಿನ ಕಿತ್ತೂರ ರಾಣಿ ಚನ್ನಮ್ಮ ಪ್ರಶಸ್ತಿ ಪ್ರದಾನ ಮಾಡಲಾಯಿತು. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಖಾತೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಕಾರ್ಯಕ್ರಮ ಉದ್ಘಾಟಿಸಿದರು, ಮಹಿಳಾ ಸಾಧಕಿಯರು ಹಾಗೂ ಮಹಿಳೆಯರ ಅಭಿವೃದ್ಧಿಗಾಗಿ ಶ್ರಮಿಸಿದ ಸಂಸ್ಥೆಗಳಿಗೆ ಪ್ರಶಸ್ತಿ ಪ್ರದಾನ ಮಾಡಿದರು.

<><><>

**ಮಹಿಳೆಯರ ಸ್ವಾವಲಂಬಿ ಬದುಕಿಗಾಗಿ** ರಾಜ್ಯ ಸರ್ಕಾರವು ಹಲವು ಯೋಜನೆಗಳನ್ನು ರೂಪಿಸಿ ಜಾರಿಗೆ ತಂದಿದೆ. ಗೃಹಲಕ್ಷ್ಮೀ ಹಾಗೂ ಶಕ್ತಿ ಯೋಜನೆಗಳು ಮಹಿಳೆಯರ ಸಶಕ್ತೀಕರಣಕ್ಕೆ ಸಹಕಾರಿಯಾಗಿವೆ ಎಂದು ರಾಜ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ ಹೇಳಿದರು. ಬೀದರ ನಗರದ ರಾಜ್ಯ ಸರಕಾರಿ ನೌಕರರ ಭವನದಲ್ಲಿ ಆಯೋಜಿತ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಪ್ರತಿಭಾನ್ವಿತ ಮಕ್ಕಳಿಗೆ 2024–25 ನೇ ಸಾಲಿನ ಹೊಯ್ಸಳ ಮತ್ತು ಕೆಳದಿ ಚನ್ನಮ್ಮ ಪ್ರಶಸ್ತಿ, ಉತ್ತಮ ಅಂಗನವಾಡಿ ಕಾರ್ಯಕರ್ತೆ ಪ್ರಶಸ್ತಿಗಳನ್ನು ಪ್ರದಾನಿಸಲಾಯಿತು. ನೂತನವಾಗಿ ನೇಮಕಗೊಂಡ ಅಂಗನವಾಡಿ ಕಾರ್ಯಕರ್ತೆಯರಿಗೆ ಮತ್ತು ಸಹಾಯಕಿಯರಿಗೆ ನೇಮಕಾತಿ ಪತ್ರವನ್ನು ಸಚಿವರು ವಿತರಿಸಿದರು.

<><><>

**ಮಹಿಳೆಯರು ನವ ಉದ್ಯಮಗಳಲ್ಲಿ** ತಮ್ಮನ್ನು ತೊಡಗಿಸಿಕೊಳ್ಳುವ ಮೂಲಕ ಆರ್ಥಿಕವಾಗಿ ಹೆಚ್ಚು ಸಬಲರಾಗಬೇಕು ಎಂದು ಹಿರಿಯ ಸಾಹಿತಿ ಮಾಲತಿ ಪಟ್ಟಣಶೆಟ್ಟಿ ಹೇಳಿದರು. ಧಾರವಾಡದ ಸಾಹಿತ್ಯ ಭವನದಲ್ಲಿ ಜರುಗಿದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

<><><>

**ಬಳ್ಳಾರಿ ಹಾಗೂ ವಿಜಯನಗರ** ಜಿಲ್ಲೆಗಳನ್ನು ಒಳಗೊಂಡ ಒಟ್ಟು 31 ನ್ಯಾಯಾಲಯಗಳಲ್ಲಿ ಜರುಗಿದ ಲೋಕ ಅದಾಲತ್ ನಲ್ಲಿ ಒಟ್ಟು 11 ಸಾವಿರದ 634 ಪ್ರಕರಣಗಳು ಇತ್ಯರ್ಥಗೊಂಡಿವೆ. ಒಟ್ಟು 51 ಕೋಟಿ 3 ಲಕ್ಷದ 97 ಸಾವಿರದ 305 ರೂಪಾಯಿ ಪರಿಹಾರ ನೀಡುವಂತೆ ಜನತಾ ಅದಾಲತ್ ಆದೇಶಿಸಿದೆ. ಸಾರ್ವಜನಿಕರು – ಕಕ್ಷಿದಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿಕೊಳ್ಳುವುದು, ಉತ್ತಮ ಜೀವನ ನಡೆಸಲು ಒಂದು ಸದವಕಾಶವಾಗಿದೆ ಎಂದು ನ್ಯಾಯಾಧೀಶರಾದ ಕೆ.ಜಿ ಶಾಂತಿ ಅವರು ಹೇಳಿದರು.

<><><>